ಶ್ರೀ ಬಾಲಚಂದ್ರ ಲ. ಜಾರಕಿಹೊಳಿ :– ಮಾನ್ಯ ಅಧ್ಯಕ್ಷರೆ, ನಮ್ಮ ಇಲಾಖೆಯಿಂದ ಅನುಮತಿ ಇದೆ ಎಂದು ಮಾನ್ಯ ಹಿರಿಯ ಸದಸ್ಯರು ಹೇಳಿದರು. ಮಾನ್ಯ ಸದಸ್ಯರಿಗೆ ಇವತ್ತು ನಾನೊಂದು ಸಲಹೆ ಮಾಡುತ್ತೇನೆ. ನಮ್ಮ ಇಲಾಖೆಯ ಅಧಿಕಾರಿಗಳನ್ನು, ಮಾನ್ಯ ಶಾಸಕರನ್ನು ನನ್ನ ಕಛೇರಿಗೆ ಕರೆಸಿ ಚರ್ಚೆ ಮಾಡುತ್ತೇನೆ. ಚರ್ಚೆ ಮಾಡಿದಾಗ ಅಕಸ್ಮಾತ್ ಅನುಮತಿ ಇತ್ತು ಎಂದರೆ ಅವರಿಗೆ permission ಕೊಡುತ್ತೇವೆ. ಅನುಮತಿ ಇಲ್ಲ ಎಂದರೆ ಅವರು ಅದಕ್ಕೆ ಒಂದು ಪತ್ರ ಕೊಡಲಿ, ನಂತರ ಪರಿಶೀಲನೆ ಮಾಡಿ ಅಗತ್ಯ ಕ್ರಮ ತೆಗೆದುಕೊಳ್ಳುತ್ತೇವೆ.

ವಿಷಯ: ರಾಜ್ಯದಲ್ಲಿ ಪಶುಸಂಗೋಪನಾ ಇಲಾಖೆಯಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವುದು ಹಾಗೂ ಪಶುವೀರ್ಯಾಣು ಕೊರತೆಯನ್ನು ನೀಗಿಸುವುದು.

37 (166) ಶ್ರೀ ಕೃಷ್ಣಬೈರೇಗೌಡ ಸಿ.ಬಿ. (ವೇಮಗಲ್) : ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಪಶುಸಂಗೋಪನೆ ಇಲಾಖೆಯಲ್ಲಿ ವ್ಯಂದವಾರು ಮಂಜೂರಾದ ಹುದ್ದೆಗಳೆಷ್ಟು ಹಾಗೂ ಇವುಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು;

ಆ) ಈ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಏನು ಕ್ರಮಕ್ಕೆಗೊಂಡಿದೆ; (ವಿವರ ನೀಡುವುದು ಹಾಗೂ ಜಿಲ್ಲಾವಾರು ಅದರಲ್ಲೂ ಮುಖ್ಯವಾಗಿ ಕೋಲಾರ ಜಿಲ್ಲೆಯ ಮಾಹಿತಿಯನ್ನು ಪ್ರತ್ಯೇಕವಾಗಿ ನೀಡುವುದು);

ಇ) ರಾಜ್ಯದಲ್ಲಿ ಅದರಲ್ಲೂ ವಿಶೇಷವಾಗಿ ಕೋಲಾರ ಜಿಲ್ಲೆಯಲ್ಲಿ ಪಶು ವೀರ್ಯಾಣು (ಸೆಮೆನ್) ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ ಹೈನುಗಾರಿಕೆಗೆ ಅತ್ಯಂತ ಅವಶ್ಯವಾದ ಪಶುವೀರ್ಯಾಣು (ಸೆಮೆನ್) ವನ್ನು ಪೂರ್ಣ ಪ್ರಮಾಣದಲ್ಲಿ ಒದಗಿಸಲು ವಿಫಲವಾಗಿರುವುದಕ್ಕೆ ಕಾರಣಗಳೇನು?

ಡಾ: ವಿ.ಎಸ್. ಆಚಾರ್ಯ (ವೈದ್ಯಕೀಯ ಶಿಕ್ಷಣ ಮತ್ತು ಪಶುಸಂಗೋಪನೆ ಸಚಿವರು)

ಅ) ರಾಜ್ಯದಲ್ಲಿ ಪಶುಸಂಗೋಪನಾ ಇಲಾಖೆಯಲ್ಲಿ ವ್ಯಂದವಾರು ಮಂಜೂರಾದ ಹುದ್ದೆಗಳು ಹಾಗೂ ಇವುಗಳಲ್ಲಿ ಖಾಲಿ ಇರುವ ಹುದ್ದೆಗಳ ವಿವರಗಳನ್ನು ಅನುಬಂಧ 1–ರಲ್ಲಿ ನೀಡಲಾಗಿದೆ.

ಆ) ಕೋಲಾರ ಜಿಲ್ಲೆಯಲ್ಲಿ ಪಶುಸಂಗೋಪನಾ ಇಲಾಖೆಯಲ್ಲಿ ವ್ಯಂದವಾರು ಮಂಜೂರಾದ, ಭರ್ತಿಯಾದ ಹಾಗೂ ಖಾಲಿ ಹುದ್ದೆಗಳ ವಿವರಗಳನ್ನು ಅನುಬಂಧ–2 ರಲ್ಲಿ ನೀಡಲಾಗಿದೆ.

ಏಳು ಸಹಾಯಕ ನಿರ್ದೇಶಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಪರಿಶೀಲನೆಯಲ್ಲಿದೆ.

577 ಪಶುವೈದ್ಯಾಧಿಕಾರಿಗಳ ಹುದ್ದೆಗಳನ್ನು ವಿಶೇಷ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಅನುಮೋದನೆ ನೀಡಿದೆ. ಆಯ್ಕೆ ಮಾಡಲಾದ 250 ಪಶುವೈದ್ಯಾಧಿಕಾರಿಗಳ ಅಂತಿಮ ಪಟ್ಟಿಯನ್ನು ದಿನಾಂಕ: 10–3–2006 ರಂದು ಪ್ರಕಟಿಸಿದೆ. ಉಳಿದ 327 ಪಶುವೈದ್ಯಾಧಿಕಾರಿಗಳ ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿದೆ.